**Akashvani : Bangalore**
**Regional Bulletin In Kannada**
**05.05.2025 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**05.05.2025 / 14.30  hrs**

**<><*<><>*><>**

ಮುಖ್ಯಾಂಶಗಳು

**೧. ರಾಜ್ಯದಲ್ಲಿ ಇನ್ನೆರಡು ತಿಂಗಳಲ್ಲಿ ಪರಿಶಿಷ್ಟ ಜಾತಿಯ ಒಳಮೀಸಲಾತಿ ಜಾರಿ- ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ**

**೨. ಶಿರಸಿ ಅರಣ್ಯ ಕಾಲೇಜಿನಲ್ಲಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದ ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್**

**೩. ಆಲಮಟ್ಟಿ ಅಣೆಕಟ್ಟು ಎತ್ತರ ೫೨೪ ಮೀಟರ್‌ಗಳಿಗೆ ಹೆಚ್ಚಿಸಲು ಸರ್ಕಾರ ಬದ್ಧ - ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್**

**೪. ಕರ್ನಾಟಕ ಲೋಕಾಯುಕ್ತದಲ್ಲಿ ೩೦ ಸಾವಿರ ಪ್ರಕರಣಗಳು ವಿಚಾರಣೆಗೆ ಬಾಕಿ**

**<><*<><>*><>**

ಪರಿಶಿಷ್ಟ ಜಾತಿಗಳ ನಿಖರ ದತ್ತಾಂಶ ಸಂಗ್ರಹ ಕಾರ್ಯ ಇಂದಿನಿಂದ ಆರಂಭವಾಗಿದ್ದು, ೨ ತಿಂಗಳಲ್ಲಿ ಒಳಮೀಸಲಾತಿ ಜಾರಿಗೊಳಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಇಂದಿನಿಂದ ಮೂರು ಹಂತದಲ್ಲಿ ಸಮೀಕ್ಷೆ ನಡೆಯುತ್ತಿದೆ. ಇದೇ ೧೭ರವರೆಗೆ ಮನೆ ಮನೆ ಸಮೀಕ್ಷೆ ನಡೆಯಲಿದೆ. ಇದೇ ೧೯ ರಿಂದ ೨೧ ರವರೆಗೆ ವಿಶೇಷ ಶಿಬಿರಗಳನ್ನು ಆಯೋಜಿಸಲಾಗುತ್ತಿದ್ದು, ಇದೇ ೧೯ ರಿಂದ ೨೩ರವರೆಗೆ ಆನ್‌ಲೈನ್ ಮೂಲಕ ನೋಂದಣಿ ಮಾಡಿಕೊಳ್ಳಬಹುದು ಎಂದು ಹೇಳಿದ್ದಾರೆ.

**ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ (   42 ಸೆಕೆಂಡ್ಸ್)**

ಪರಿಶಿಷ್ಟ ಜಾತಿಯಲ್ಲಿನ ೧೦೧ ಜಾತಿಗಳ ನಿಖರ ಮಾಹಿತಿ ಕಲೆಹಾಕಲು ಸಮೀಕ್ಷೆ ನಡೆಸಲಾಗುತ್ತಿದೆ. ಆದಿ ದ್ರಾವಿಡ. ಆದಿ ಕರ್ನಾಟಕ, ಆದಿ ಆಂಧ್ರ ಜಾತಿಗಳಲ್ಲಿ ಎಡ-ಬಲ ಗೊಂದಲ ನಿವಾರಣೆಯಾಗಬೇಕಾಗಿದೆ. ಸಮೀಕ್ಷೆಯಿಂದ ಈ ಎಲ್ಲಾ ಗೊಂದಲಗಳಿಗೆ ಪರಿಹಾರ ಸಿಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ವರದಿ ಆಧರಿಸಿ ನ್ಯಾಯಮೂರ್ತಿ ನಾಗ ಮೋಹನ್‌ದಾಸ್ ಅಧ್ಯಕ್ಷತೆಯ ಆಯೋಗ ೬೦ ದಿನಗಳಲ್ಲಿ ಶಿಫಾರಸ್ಸು ಮಾಡಲಿದೆ. ತಕ್ಷಣವೇ ಒಳಮೀಸಲಾತಿ ಜಾರಿಗೊಳಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ ಎಲ್ಲಾ ಪರಿಶಿಷ್ಟ ಜಾತಿಯ ಜನರು ಸಮೀಕ್ಷೆಯಲ್ಲಿ ಭಾಗವಹಿಸುವಂತೆ ಕರೆ ನೀಡಿದ್ದಾರೆ.

**<><*<><>*><>**

ಸುಸ್ಥಿರ ಅಭಿವೃದ್ಧಿಯೇ ನಮ್ಮ ಮೂಲ ಮಂತ್ರವಾಗಿರಬೇಕು ಎಂದು ಉಪ ರಾಷ್ಟ್ರಪತಿ ಜಗದೀಪ್ ಧನಕರ್ ಅಭಿಪ್ರಾಯಪಟ್ಟಿದ್ದಾರೆ. ಉತ್ತರಕನ್ನಡ ಜಿಲ್ಲೆಯ ಶಿರಸಿಯ ಅರಣ್ಯ ಕಾಲೇಜಿನಲ್ಲಿ 'ದೇಶ ಕಟ್ಟುವಿಕೆಯಲ್ಲಿ ಅರಣ್ಯ ವಿಜ್ಞಾನದ ಪಾತ್ರ' ವಿಷಯದ ಕುರಿತಾಗಿ ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ ಅವರು ಮಾತನಾಡಿದರು. ಇದೇ ವೇಳೆ ಅಭಿವೃದ್ಧಿ ಮತ್ತು ಪರಿಸರದ ನಡುವೆ ಸಮತೋಲನ ಅಗತ್ಯ ಎಂದು ತಿಳಿಸಿದ್ದಾರೆ. ಪ್ರಾಚೀನ ಕಾಲದಿಂದಲೂ ಪರಿಸರ ಮತ್ತು ಅರ್ಥ ವ್ಯವಸ್ಥೆ ಪರಸ್ಪರ ಪೂರಕವಾಗಿ ಸಾಗಿದೆ. ಪರಿಸರ ನಾಶ ಮಾಡಿ ಅಭಿವೃದ್ಧಿ ಚಟುವಟಿಕೆ ನಡೆಸುವ ಬದಲು ಪ್ರಾಕೃತಿಕ ಸೌಹಾರ್ದತೆ ಇಂದಿನ ತುರ್ತು ಅಗತ್ಯ ಎಂದು ಪ್ರತಿಪಾದಿಸಿದ್ದಾರೆ.

**ಧ್ವನಿ: ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ (  ಸೆಕೆಂಡ್ಸ್)**

ಅರಣ್ಯ ಕಾಲೇಜಿನ ಆವರಣದಲ್ಲಿ ಉಪರಾಷ್ಟ್ರಪತಿ ಹಾಗೂ ಅವರ ಪತ್ನಿ ತಮ್ಮ ತಾಯಿಯ ಸ್ಮರಣಾರ್ಥ 'ಏಕ್ ಪೇಡ್ ಮಾ ಕೆ ನಾಮ್, ಉಪಕ್ರಮದ ಭಾಗವಾಗಿ ಸಸಿಗಳನ್ನು ನೆಟ್ಟರು. ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಸಚಿವ ಮಂಕಾಳ ವೈದ್ಯ, ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ, ಶಾಸಕ ಭೀಮಣ್ಣ ನಾಯ್ಕ ಉಪಸ್ಥಿತರಿದ್ದರು.

**<><*<><>*><>**

"ಆಲಮಟ್ಟಿ ಅಣೆಕಟ್ಟು ಎತ್ತರವನ್ನು ೫೨೪ ಮೀಟರ್‌ಗೆ ಹೆಚ್ಚಿಸಿ, ರಾಜ್ಯದ ಪಾಲಿನ ನೀರು ಬಳಸಿಕೊಳ್ಳಲು ರಾಜ್ಯ ಸರ್ಕಾರ ಬದ್ಧವಾಗಿದೆ" ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, "೨೦೧೦ರಲ್ಲಿ

ಕೃಷ್ಣಾ ಜಲ ನ್ಯಾಯಾಧಿಕರಣ ತೀರ್ಪಿನ ಅನ್ವಯ ಕೇಂದ್ರ ಸರ್ಕಾರ ಗೆಜೆಟ್ ಅಧಿಸೂಚನೆ ಹೊರಡಿಸಬೇಕಾಗಿದೆ. ಈ ಸಂಬಂಧ ಇದೇ ೭ರಂದು ಕೇಂದ್ರ ಜಲಶಕ್ತಿ ಸಚಿವಾಲಯ ದೆಹಲಿಯಲ್ಲಿ ನಾಲ್ಕು ರಾಜ್ಯ ಸರ್ಕಾರದ ಪ್ರತಿನಿಧಿಗಳ ಸಭೆ ಕರೆದಿದೆ ಎಂದು ಹೇಳಿದ್ದಾರೆ. ಈ ವಿಚಾರವಾಗಿ ಕಾನೂನು ತಜ್ಞರ ಜತೆ ಚರ್ಚೆ ನಡೆಸಲಾಗಿದ್ದು, ಎರಡು ದಿನಗಳಲ್ಲಿ ಅವರು ತಮ್ಮ ಅಭಿಪ್ರಾಯ ನೀಡಲಿದ್ದಾರೆ. ಇವುಗಳ ಆಧಾರದ ಮೇಲೆ ಕೇಂದ್ರ ಸಚಿವಾಲಯದ ಸಭೆಯಲ್ಲಿ ರಾಜ್ಯದ ಬೇಡಿಕೆ ಪ್ರಸ್ತಾಪಿಸಲು ನಿರ್ಧರಿಸಲಾಗಿದೆ ಎಂದು ತಿಳಿಸಿದ್ದಾರೆ.

<><*<><>*><>

ಬೆಂಗಳೂರಿನ ಪ್ರಯಾಣಿಕರಿಗೆ ಮತ್ತಷ್ಟು ಸುಲಭ ಸಾರಿಗೆ ಸೇವೆ ಒದಗಿಸಲು ಮೆಟ್ರೋ, ಸುರಂಗ ರಸ್ತೆ, ರಸ್ತೆ ಸಾರಿಗೆ ಮತ್ತಿತರ ಸಾರ್ವಜನಿಕರ ಪ್ರಯಾಣಕ್ಕೆ ಅನುಕೂಲ ಕಲ್ಪಿಸುವ ಯೋಜನೆಗಳ ವಿಸ್ತರಣೆಗೆ ಸಂಬಂಧಿಸಿದಂತೆ ಮಹತ್ವದ ಸಭೆ ನಡೆಯಿತು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್, ಅಧಿಕಾರಿಗಳ ಸಮಾಲೋಚನೆ ನಡೆಸಿದರು. ಬಿಬಿಎಂಪಿ ಆಡಳಿತಾಧಿಕಾರಿ ತುಷಾರ್ ಗಿರಿನಾಥ್, ಮುಖ್ಯ ಆಯುಕ್ತ ಮಹೇಶ್ವರ್ ರಾವ್, ಬಿಡಿಎ ಆಯುಕ್ತ ಜಯರಾಮ್ ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

<><*<><>*><>

ಕರ್ನಾಟಕ ಲೋಕಾಯುಕ್ತದಲ್ಲಿ ಪ್ರಸ್ತುತ ೧೫ ರಿಂದ ೨೦ ಸಾವಿರ ಪ್ರಕರಣಗಳು ವಿಚಾರಣೆಗೆ ಬಾಕಿ ಇವೆ ಎಂದು ಉಪ ಲೋಕಾಯುಕ್ತ ಕೆ.ಎನ್.ಫಣೀಂದ್ರ ತಿಳಿಸಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿಂದು ನಡೆದ ಸಭೆಯಲ್ಲಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ಲೋಕಾಯುಕ್ತದಲ್ಲಿ ದಾಖಲಾಗುವ ಪ್ರಕರಣಗಳ ಸಂಖ್ಯೆ ಹೆಚ್ಚಾಗುತ್ತಿದೆ ಎಂದು ಹೇಳಿದ್ದಾರೆ. ಸರ್ಕಾರಿ ಕಚೇರಿಗಳಲ್ಲಿ ಭ್ರಷ್ಟಾಚಾರ ಮಿತಿಮೀರಿ ಹೋಗಿದ್ದು, ಅಧಿಕಾರಿಗಳು ಮತ್ತು ನೌಕರರ ಮೇಲೆ ಸಾರ್ವಜನಿಕರು ನಕಾರಾತ್ಮಕ ಮನೋಭಾವ ಹೊಂದಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ. ಇದೇ ಸಂದರ್ಭದಲ್ಲಿ ಉಪಲೋಕಾಯುಕ್ತರು ಹಲವು ಪ್ರಕರಣಗಳ ವಿಚಾರಣೆ ನಡೆಸಿದರು.

<><*<><>*><>

ರಾಜ್ಯ ಸರಕಾರ ಜಾರಿಗೆ ತಂದಿರುವ "ಪಂಚ ಗ್ಯಾರಂಟಿ" ಯೋಜನೆಗಳ ಕುರಿತ ಕಿರುಪುಸ್ತಕವನ್ನು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಬೆಳಗಾವಿಯಲ್ಲಿ ಇಂದು

ಬಿಡುಗಡೆಗೊಳಿಸಿದರು. ಬಳಿಕ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳನ್ನು ರಾಜ್ಯದಲ್ಲಿ ಸಮರ್ಪಕವಾಗಿ ಅನುಷ್ಠಾನಗೊಳಿಸಲಾಗಿದೆ. ಪ್ರತಿಯೊಂದು ಕುಟುಂಬಕ್ಕೂ ಗ್ಯಾರಂಟಿ ಯೋಜನೆಗಳು ತಲುಪಿದ್ದು, ಮಹಿಳೆಯರು, ಕಾರ್ಮಿಕರು ಸೇರಿದಂತೆ ಬಹುಜನರ ಜೀವನಮಟ್ಟ ಸುಧಾರಣೆಗೆ ಇದರಿಂದ ಅನುಕೂಲವಾಗಿದೆ ಎಂದು ತಿಳಿಸಿದ್ದಾರೆ.

<><*<><>*><>

ದಾವಣಗೆರೆ ಜಿಲ್ಲೆಯಾದ್ಯಂತ ಉತ್ತಮ ಮಳೆಯಾಗಿದ್ದು, ಕೃಷಿ ಚಟುವಟಿಕೆಗಳು ಗರಿಗೆದರಿವೆ. ಚನ್ನಗಿರಿ ತಾಲ್ಲೂಕಿನ ಬಸವಾಪಟ್ಟಣ ಹೋಬಳಿ ವ್ಯಾಪ್ತಿಯಲ್ಲಿ ಬಿರುಗಾಳಿ ಸಹಿತ ಸುರಿದ ಮಳೆಯಿಂದ ತೋಟಗಾರಿಕಾ ಬೆಳೆಗಳಿಗೆ ಸಾಕಷ್ಟು ಹಾನಿಯಾಗಿದೆ. ಕಣಿವೆ ಬಿಳಚಿ ಹೊರ ವಲಯದಲ್ಲಿ ಹತ್ತಾರು ವಿದ್ಯುತ್ ಕಂಬಗಳು ನೆಲಕ್ಕುರುಳಿದ್ದು, ಚಿರಡೋಣಿ, ಕಂಚುಗಾರನಹಳ್ಳಿ, ಬೆಳಲಗೆರೆ ಗ್ರಾಮಗಳಲ್ಲಿ ವಿದ್ಯುತ್ ಸಂಪರ್ಕ ಕಡಿತಗೊಂಡಿದೆ. ಈ ಮಧ್ಯೆ ಚನ್ನಗಿರಿ ತಾಲ್ಲೂಕಿನಾದ್ಯಂತ ಕೃಷಿ ಚಟುವಟಿಕೆಗಳು ಗರಿಗೆದರಿದ್ದು, ರೈತರು ಮಾಗಿ ಉಳುಮೆಯಲ್ಲಿ ತೊಡಗಿದ್ದಾರೆ.

<><*<><>*><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ೨೦೨೪-೨೫ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ನೋಂದಾಯಿತ ರೈತರಿಂದ ರಾಗಿ ಖರೀದಿಸುವ ಪ್ರಮಾಣವನ್ನು ಹೆಚ್ಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ಎ.ಬಿ ಬಸವರಾಜು ತಿಳಿಸಿದ್ದಾರೆ. ಈ ಕುರಿತು ಮಾಹಿತಿ ನೀಡಿರುವ ಅವರು, ಎಲ್ಲಾ ತಾಲ್ಲೂಕು ಖರೀದಿ ಕೇಂದ್ರಗಳಲ್ಲಿ ರಾಗಿ ಖರೀದಿ ಪ್ರಕ್ರಿಯೆ ಪ್ರಾರಂಭಿಸಲಾಗಿದ್ದು, ಪ್ರತಿ ಎಕರೆಗೆ ೧೦ ಕ್ವಿಂಟಾಲ್ ನಂತೆ ಗರಿಷ್ಠ ೩೦ ಕ್ವಿಂಟಾಲ್ ರಾಗಿಯನ್ನು ಖರೀದಿ ಮಾಡಲಾಗುವುದು ಎಂದು ಹೇಳಿದ್ದಾರೆ. ಜೂನ್ ೩೦ ರವರೆಗೆ ರಾಗಿ ಖರೀದಿಯ ಅವಧಿಯನ್ನು ವಿಸ್ತರಣೆ ಮಾಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

<><*<><>*><>

ಬೆಳಗಾವಿ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಮೇ ೧ ರಿಂದ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ “ದುಡಿಯೋಣ ಬಾ ಅಭಿಯಾನ” ಹಮ್ಮಿಕೊಳ್ಳಲಾಗಿದೆ. ಅರ್ಹ ಕೂಲಿಕಾರರು ಮನ್ರೇಗಾದಡಿ ಉದ್ಯೋಗ ಪಡೆದುಕೊಳ್ಳಬಹುದು ಎಂದು ಬೆಳಗಾವಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ರಾಹುಲ್ ಶಿಂಧೆ ತಿಳಿಸಿದ್ದಾರೆ. ಮನರೇಗಾ ಯೋಜನೆಯಡಿ ಕೂಲಿಕಾರರಿಗೆ ೧೦೦ ದಿನಗಳ ಕುಶಲ ಕೆಲಸವನ್ನು

ಒದಗಿಸಲು ದುಡಿಯೋಣ ಬಾ ಅಭಿಯಾನವನ್ನು ಈಗಾಗಲೇ ಜಿಲ್ಲೆಯ ಎಲ್ಲ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನಡೆಸಲಾಗುತ್ತಿದೆ ಎಂದು ಮಾಹಿತಿ ನೀಡಿದ್ದಾರೆ.

**<><*<><>*><>**

**ಇನ್ನು ಸಂಕ್ಷಿಪ್ತ ಸುದ್ದಿಗಳು...**

೧. ಮುಖ್ಯಮಂತ್ರಿ ಸಿದ್ದರಾಮಯ್ಯ ಇದೇ ಆರಂದು ಮಂಡ್ಯ ಜಿಲ್ಲೆಯ ಪ್ರವಾಸ ಕೈಗೊಳ್ಳಲಿದ್ದು, ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕು ಸ್ಥಾಪನೆ ಮಾಡಲಿದ್ದಾರೆ. ಮೈಶುಗರ್ ಸಕ್ಕರೆ ಕಾರ್ಖಾನೆ ಆವರಣದಲ್ಲಿ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಕಂಚಿನ ಪ್ರತಿಮೆ ನಿರ್ಮಿಸಲು ಚಾಲನೆ ನೀಡಲಿದ್ದಾರೆ.

೨. ಯಾದಗಿರಿ ಜಿಲ್ಲೆಯ ಅಚ್ಚೋಲಾ ತಾಂಡಾದ ಬಳಿ ಕುರಿ ಕಾಯಲು ಹೋಗಿದ್ದ ಮೂವರು ಬಾಲಕರು ನೀರು ಕುಡಿಯಲು ಹೋಗಿ ನೀರಿನ ಹೊಂಡದಲ್ಲಿ ಮುಳುಗಿ ಸಾವಪ್ಪಿದ್ದಾರೆ. ಯಾದಗಿರಿ ಗ್ರಾಮೀಣ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

೩. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ್ಥಾಪನಾ ದಿನಾಚರಣೆ ಆಚರಿಸಲಾಯಿತು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**